**<u>ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು</u>**

**<u>ಮುಂದುವರಿದ ಮುಖ್ಯ ವಿಚಾರಣೆಃ- ಶ್ರೀ ಬಿ ಎ ಕೆ ವಕೀಲರಿಂದ ವಾದಿಯ ಪರವಾಗಿ</u>**

16. ನಾನು ಈ ದಿನ ನನ್ನ ಮುಖ್ಯ ವಿಚಾರಣೆ ಪ್ರಮಾಣಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಸಂಗತಿಗಳು ನಿಜ ಇದ್ದು, ನಾನೇ ಹೇಳಿ ಬರೆಸಿದ್ದು, ಅದರಲ್ಲಿನ ಪ್ರಮಾಣಕರ್ತನ ಸಹಿಗಳು ನನ್ನದೇ ಇರುತ್ತವೆ ಹಾಗೂ ಈ ಕೆಳಕಂಡ ದಾಖಲಾತಿಗಳನ್ನು ಸಲ್ಲಿಸುತ್ತಿದ್ದೇನೆ.

- ದಿಃ04.06.2024 ರ ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾ ಚೆಕ್ ಸಂಖ್ಯೆ. 029237 ಹಾಜರು ಪಡಿಸಿದ್ದು ಅದನ್ನು ನಿಪಿ-1 ಎಂದು,
- ದಿಃ 19.10.2024 ರಂದು ಪ್ರತಿವಾದಿಗೆ ನೀಡಿರುವ ನೋಟೀಸ್ ಹಾಜರು ಪಡಿಸಿದ್ದು ಅದನ್ನು ನಿಪಿ-2 ಎಂದು,
- ದಿಃ 24.12.2019 ರ ನೋಂದಾಯಿತ ದಾನ ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-3 ಎಂದು,
- ದಿಃ 17.02.2022 ರ ನೋಂದಾಯಿತ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-4 ಎಂದು,
- ದಿಃ 17.02.2022 ರ ನೋಂದಾಯಿತ ಖಾಲಿ ನಿವೇಶನದ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-5 ಎಂದು,
- ಮೂರು ಇ- ಸ್ವತ್ತು ದಾಖಲಾತಿಗಳನ್ನು ಒಟ್ಟಾಗಿ ಹಾಜರು ಪಡಿಸಿದ್ದು ಅವುಗಳನ್ನು ನಿಪಿ-6 ರಿಂದ 8 ಎಂದು,
- ಸರ್ವೇ ನಂ. 22 ರ ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-9 ಎಂದು ಗುರುತಿಸಲಾಯಿತು.

17. ದಾವೆಯಲ್ಲಿ ಕೇಳಿರುವಂತೆ ಡಿಕ್ರಿ ಮಾಡುವಂತೆ ಕೋರುತ್ತೇನೆ.

**<u>ಪಾಟೀ ಸವಾಲುಃ-</u>** ಪ್ರತಿವಾದಿಯರ ಪರ ವಕೀಲರು ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರಿದ್ದು, ಪಾಟೀ ಸವಾಲಿಗಾಗಿ ಪ್ರಕರಣವನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು)
ಓ.ಹೇ.ಕೇ. ಸರಿ. ಇದೆ.

2 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ, ಚಿತ್ರದುರ್ಗ